ಸಂಖ್ಯೆ : ಇಡಿ/ಕೆಇಎ/01/ಕೆಸೆಟ್-26/2026-27

ದಿನಾಂಕ : 06.11.2026

ಪ್ರಕಟಣೆ

ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ (ಕೆಸೆಟ್)-2026ರ ಅಂತಿಮ ಕೀ ಉತ್ತರ ಮತ್ತು ವಿಷಯವಾರು ತಾತ್ಕಾಲಿಕ ಅಂಕಪಟ್ಟಿಯನ್ನು ಪ್ರಕಟಿಸುವ ಬಗ್ಗೆ.

****

ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ (ಕೆಸೆಟ್)-2026ನ್ನು ದಿನಾಂಕ:11.10.2026 ರಂದು ನಡೆಸಲಾಗಿದ್ದು, ಸದರಿ ಪರೀಕ್ಷೆಯ ಪತ್ರಿಕೆ-1 ಮತ್ತು ಪತ್ರಿಕೆ-2 ಒಟ್ಟು 37 ವಿಷಯಗಳಿಗೆ ತಾತ್ಕಾಲಿಕ ಕೀ ಉತ್ತರಗಳನ್ನು ದಿನಾಂಕ:12.10.2026 ರಂದು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಪ್ರಕಟಿಸಿ, ಸದರಿ ಕೀ ಉತ್ತರಗಳಿಗೆ ಆಕ್ಷೇಪಣೆಗಳಿದ್ದಲ್ಲಿ, ದಿನಾಂಕ:14.10.2026 ರ ಬೆಳಿಗ್ಗೆ 10.30 ಗಂಟೆಯೊಳಗೆ ಸಲ್ಲಿಸಲು ಅವಕಾಶ ನೀಡಲಾಗಿತ್ತು.

ಪ್ರಕಟಿತ ಕೀ ಉತ್ತರಗಳಿಗೆ ಅಭ್ಯರ್ಥಿಗಳಿಂದ ಸ್ವೀಕೃತವಾದ ಆಕ್ಷೇಪಣೆಗಳನ್ನು ವಿಷಯ ತಜ್ಞರ ಸಮಿತಿಯ ಮೂಲಕ ಪರಿಶೀಲಿಸಿ, ವಿಷಯ ತಜ್ಞರ ಶಿಫಾರಸ್ಸಿನಂತೆ ಪರಿಷ್ಕೃತ ಕೀ ಉತ್ತರಗಳನ್ನು ದಿನಾಂಕ: 23.10.2026 ರಂದು ಪ್ರಕಟಿಸಲಾಗಿತ್ತು.

ಮುಂದುವರೆದು, ಅಭ್ಯರ್ಥಿಗಳು ಪರೀಕ್ಷೆಯಲ್ಲಿ ಗಳಿಸಿದ ತಾತ್ಕಾಲಿಕ ಫಲಿತಾಂಶವನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಪ್ರಕಟಿಸಿ, ತಾತ್ಕಾಲಿಕ ಫಲಿತಾಂಶಕ್ಕೆ ದಿನಾಂಕ:26.10.2026 ರ ಬೆಳಿಗ್ಗೆ 10.30 ರೊಳಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶ ನೀಡಲಾಗಿತ್ತು ಅದರಂತೆ ಸ್ವೀಕೃತವಾದ ಆಕ್ಷೇಪಣೆಗಳನ್ನು ಪರಿಶೀಲಿಸಲಾಗಿರುತ್ತದೆ.

ಅದರಂತೆ ಅಂತಿಮ ಕೀ ಉತ್ತರಗಳನ್ನು ಹಾಗೂ ಅಭ್ಯರ್ಥಿಗಳು ಪರೀಕ್ಷೆಯಲ್ಲಿ ಗಳಿಸಿದ ವಿಷಯವಾರು ತಾತ್ಕಾಲಿಕ ಅಂಕ ಪಟ್ಟಿಯನ್ನು ಪ್ರಾಧಿಕಾರದ ವೆಬ್ ಸೈಟ್ ನಲ್ಲಿ ಪ್ರಕಟಿಸಲಾಗಿದೆ.

ಕಾರ್ಯ ನಿರ್ವಾಹಕ ನಿರ್ದೇಶಕರು

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in